# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೈದನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ:12ನೇ ಜುಲೈ, 2018
(ಸಮಯ: ಬೆಳಗ್ಗೆ 10.00 ಗಂಟೆಗೆ)

* * *

### 01. ಪ್ರಶ್ನೋತ್ತರ

ಅ. ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

ಆ. **ತಡೆಹಿಡಿಯಲಾದ ಪ್ರಶ್ನೆ:**

| | |
|---|---|
| (1) ಎರಡನೆಯ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಎನ್. ಅಪ್ಪಾಜಿಗೌಡ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 22(163) | **ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು** |
| (2) ಎರಡನೆಯ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಅರುಣ ಶಹಾಪುರ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 23(131) | |

ಇ. ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

### 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಅ) **ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮಾನ್ಯ ಮುಖ್ಯಮಂತ್ರಿಯವರು)** ಅವರು 4ನೇ ಹಣಕಾಸು ಆಯೋಗವು ರಾಜ್ಯದ ಪಂಚಾಯತ್ ರಾಜ್ ಸಂಸ್ಥೆ ಮತ್ತು ನಗರ ಸ್ಥಳೀಯ ಸಂಸ್ಥೆಗಳಿಗೆ ಅನುದಾನ ಹಂಚಿಕೆ ಮತ್ತು ಇತರೆ ಅಧಿಕಾರದ ಬಗ್ಗೆ ನೀಡಿರುವ ವರದಿಯನ್ನು ಸಭೆಯ ಮುಂದಿಡುವುದು.

ಆ) ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ **ಮೂರನೆಯ** ಪಟ್ಟಿಯ ರೀತ್ಯಾ.

....2

RK



## ೦೩. ವರದಿಯನ್ನೊಪ್ಪಿಸುವುದು

**ಶ್ರೀ ಕೆ.ಸಿ. ಕೊಂಡಯ್ಯ (ಅಧ್ಯಕ್ಷರು, ಕರ್ನಾಟಕ ವಿಧಾನ ಪರಿಷತ್ತಿನ ವಿಶೇಷ ಸದನ ಸಮಿತಿ) ಅವರು** ಕರ್ನಾಟಕ ರಾಜ್ಯದಲ್ಲಿ ಕಾಲೇಜು ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ವತಿಯಿಂದ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್‌ಗಳನ್ನು ವಿತರಿಸಲು ಹಾಗೂ ಖರೀದಿಸಲು ಅನುಸರಿಸಿರುವ ಮಾನದಂಡ ಹಾಗೂ ಖರೀದಿಗೆ ತಗುಲಿದ ವೆಚ್ಚ ಮತ್ತು ಈವರೆಗೆ ವಿದ್ಯಾರ್ಥಿಗಳಿಗೆ ವಿತರಿಸಲಾಗಿರುವ ಲ್ಯಾಪ್‌ಟಾಪ್‌ಗಳ ಬಗ್ಗೆ ಪರಿಶೀಲಿಸಲು ರಚಿಸಲಾದ ವಿಶೇಷ ಸದನ ಸಮಿತಿಯ ವರದಿಯನ್ನು ಒಪ್ಪಿಸುವುದು.

## ೦4. ಚುನಾವಣಾ ಪ್ರಸ್ತಾವ

**ಡಾ. ಜಯಮಾಲ ರಾಮಚಂದ್ರ** (ಮಾನ್ಯ ಸಭಾನಾಯಕರು ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ಹಿರಿಯ ನಾಗರೀಕರು ಮತ್ತು ವಿಶಿಷ್ಟಚೇತನರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು) **ಅವರು:-**

ವಿಧಾನ ಮಂಡಲದ/ವಿಧಾನ ಪರಿಷತ್ತಿನ ವಿವಿಧ ಸಮಿತಿಗಳಿಗೆ ಚುನಾವಣೆ ನಡೆಸುವ ಬದಲು ಮಾನ್ಯ ಸದಸ್ಯರುಗಳನ್ನು ನಾಮ ನಿರ್ದೇಶಿಸಲು ಮಾನ್ಯ ಸಭಾಪತಿಯವರಿಗೆ ಅಧಿಕಾರ ನೀಡುವ ಬಗ್ಗೆ ಪ್ರಸ್ತಾವ ಮಂಡಿಸುವುದು.

## ೦5. ಗಮನ ಸೆಳೆಯುವ ಸೂಚನೆಗಳು

ಅ) **ಶ್ರೀ ಪುಟ್ಟಣ್ಣ** ಅವರು ಭಾಷಾ ಅಲ್ಪಸಂಖ್ಯಾತ ಹಿಂದೂ ಧರ್ಮದ ಸಂಸ್ಥೆಗಳಿಗೆ ಅಲ್ಪಸಂಖ್ಯಾತ ಸ್ಥಾನಮಾನ ನೀಡಿ ಆದೇಶ ಹೊರಡಿಸಲು ವಿಳಂಬ ಮಾಡುತ್ತಿರುವ ಅಧಿಕಾರಿಗಳ ಧೋರಣೆ ಬಗ್ಗೆ **ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ** ಗಮನ ಸೆಳೆಯುವುದು.

ಆ) **ಶ್ರೀ ಕೋಟ ಶ್ರೀನಿವಾಸ ಪೂಜಾರಿ ಹಾಗೂ ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ** ಅವರುಗಳು ರಾಜ್ಯಾದ್ಯಂತ ಚಿನ್ನ-ಬೆಳ್ಳಿ ಕೆಲಸ ಮಾಡುವ ವಿಶ್ವಕರ್ಮ ಸಮುದಾಯದವರೂ ಸೇರಿದಂತೆ ಸುಮಾರು 10 ಲಕ್ಷಕ್ಕೂ ಅಧಿಕ ಕುಶಲಕರ್ಮಿಗಳಿಗೆ ಪೋಲೀಸರು ತನಿಖೆಯ ರೂಪದಲ್ಲಿ ನಿರಂತರ ಕಿರುಕುಳ ನೀಡುತ್ತಿರುವ ಬಗ್ಗೆ **ಮಾನ್ಯ ಉಪ ಮುಖ್ಯಮಂತ್ರಿಯವರ** ಗಮನ ಸೆಳೆಯುವುದು.

## 06. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲೆ ಚರ್ಚೆ

| | |
|---|---|
| **<u>ಶ್ರೀಯುತರುಗಳಾದ:</u>**<br><br>**ಅರುಣ ಶಹಾಪುರ**<br>**ಎಸ್.ವ್ಹಿ. ಸಂಕನೂರ**<br>**ಎನ್. ರವಿಕುಮಾರ್** | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ಹಾಗೂ ಮೈಸೂರು ವಿಶ್ವವಿದ್ಯಾಲಯಗಳಲ್ಲಿ ಬೋಧಕ/ಬೋಧಕೇತರ ಸಿಬ್ಬಂದಿಗಳ ನೇಮಕಾತಿಯಲ್ಲಿ ನಡೆದಿರುವ ಅವ್ಯವಹಾರಗಳ ಬಗ್ಗೆ ಇರುವ ತನಿಖಾ ವರದಿಗಳ ಆಧಾರದ ಮೇಲೆ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುವ ಕುರಿತು. |

## 07. ವಿತ್ತೀಯ ಕಾರ್ಯಕಲಾಪ

2018-2019ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ.**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
**www.kla.kar.nic.in/council.htm**